**OS: 85/2021**
**P.W-1**

**<u>ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ</u>**

ದಿನಾಂಕಃ 12.12.2025 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ: ವಾದಿ ಪರ ವಕೀಲರಿಂದಃ</u>**

ನಾನು ದಿನಾಂಕ 12.12.2025 ರಂದು ನಮ್ಮ ವಕೀಲರ ಮೂಲಕ, ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿ ಬರೆದ ಎಲ್ಲಾ ಮಾಹಿತಿಗಳು ಸತ್ಯವಾಗಿರುತ್ತವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಹಾಗೂ ಈ ಕೆಳಗೆ ನಮೂದಿಸಿರುವ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ರೀಸೆಟಲ್ಮೆಂಟ್ ರಿಜಿಸ್ಟರ್ ನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ- 1 ಎಂದು, ಇ.ಸಿ ದಾಖಲೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ- 2 ಎಂದು, ಎಂ.ಆರ್ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ- 3 ಮತ್ತು 4 ಎಂದು, ಸರ್ವೆ ಸ್ಕೆಚ್ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ- 5 ರಿಂದ 7 ಎಂದು, ಪಹಣಿ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ- 8 ರಿಂದ 49 ಎಂದು, ದಿಃ 11.12.1952 ರ ಕ್ರಯ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ- 50 ಎಂದು, ದಿಃ 03.02.1965 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ- 51 ಎಂದು, ದಿಃ 12.04.1966 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ- 52 ಎಂದು, ಇತ್ತೀಚಿನ ಪಹಣಿ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ- 53 ರಿಂದ 61 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**